ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.

ಸಂಖ್ಯೆ: ಸಿ7(8)/ಆರ್.ಟಿ.ಇ/ಎಜಿ ಆಡಿಟ್2015-16/2019-20 ದಿನಾಂಕ: 29-05-2020

::ಸುತ್ತೋಲೆ::

ವಿಷಯ : ಉಚಿತವಾಗಿ ಅಥವಾ ರಿಯಾಯಿತಿ ದರದಲ್ಲಿ ಯಾವುದೇ ಭೂಮಿಯನ್ನು, ಕಟ್ಟಡವನ್ನು, ಸಾಧನ ಸಾಮಾಗ್ರಿಯನ್ನು ಅಥವಾ ಇತರ ಸೌಲಭ್ಯಗಳನ್ನು ಪಡೆದ ಶಾಲೆಗಳಿಗೆ ಶಿಕ್ಷಣ ಹಕ್ಕು ಕಾಯ್ದೆಯಡಿ ಪ್ರವೇಶ ಪಡೆದ ಮಕ್ಕಳ ಶುಲ್ಕ ಮರುಪಾವತಿಯ ಬಗ್ಗೆ.

&&&&&&

ಶಿಕ್ಷಣ ಹಕ್ಕು ಕಾಯ್ದೆ ಸೆಕ್ಷನ್ 12(2)ರಲ್ಲಿ "ಶಾಲೆಯು, ಉಚಿತವಾಗಿಯಾಗಲಿ ಅಥವಾ ರಿಯಾಯಿತಿ ದರದಲ್ಲಿ ಯಾವುದೇ ಭೂಮಿಯನ್ನು, ಕಟ್ಟಡವನ್ನು, ಸಾಧನ ಸಾಮಗ್ರಿಯನ್ನು ಅಥವಾ ಇತರ ಸೌಲಭ್ಯಗಳನ್ನು ಸ್ವೀಕರಿಸಿರುವ ಕಾರಣದಿಂದಾಗಿ ನಿರ್ದಿಷ್ಟ ಸಂಖ್ಯೆಯ ಮಕ್ಕಳಿಗೆ ಉಚಿತ ಶಿಕ್ಷಣ ಒದಗಿಸಲು ಈಗಾಗಲೇ ಬದ್ಧವಾಗಿರುವಲ್ಲಿ, ಅಂಥ ಶಾಲೆಯು ಹಾಗೆ ತಾನು ಬದ್ಧರಾಗಿರುವಷ್ಟರ ಮಟ್ಟಿಗೆ ವೆಚ್ಚವನ್ನು ಮರಳಿ ಪಡೆಯಲು ಹಕ್ಕುಳ್ಳದ್ದಾಗಿರತಕ್ಕದ್ದಲ್ಲ" "School is already under obligation to provide free education to specified number of children on account of it having received any land, building, equipment or other facilities either free of cost or at a concessional rate, such school shall not be entitled for reimbursement to the extent of such obligation" ಎಂದು ಸೂಚಿಸಲಾಗಿದೆ.

ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಶಿಕ್ಷಣ ಹಕ್ಕು ಕಾಯ್ದೆಯ ಸೆಕ್ಷನ್ 12(1)(ಸಿ) ಅಡಿ ಪ್ರವೇಶ ಪಡೆದು ಮಕ್ಕಳು ವ್ಯಾಸಂಗ ಮಾಡುತ್ತಿರುವ ಶಾಲೆಗಳು ಉಚಿತವಾಗಿ ಅಥವಾ ರಿಯಾಯಿತಿ ದರದಲ್ಲಿ ಯಾವುದೇ ಭೂಮಿಯನ್ನು, ಕಟ್ಟಡವನ್ನು, ಸಾಧನ ಸಾಮಗ್ರಿಯನ್ನು ಅಥವಾ ಇತರ ಸೌಲಭ್ಯಗಳನ್ನು ಸ್ವೀಕರಿಸಿರುವ ಹಾಗೂ ಸ್ವೀಕರಿಸಿದ ಸಂದರ್ಭದಲ್ಲಿ ನಿರ್ದಿಷ್ಟ ಸಂಖ್ಯೆಯ ಮಕ್ಕಳಿಗೆ ಉಚಿತ ಶಿಕ್ಷಣವನ್ನು ನೀಡಲಾಗುವುದೆಂದು ಬದ್ಧರಾಗಿರುವುದಾಗಿ ದಾಖಲೆಗಳಲ್ಲಿ ನಮೂದಾಗಿದ್ದಲ್ಲಿ ಅಂತಹ ಮಕ್ಕಳ ಶುಲ್ಕ ಮರುಪಾವತಿಯನ್ನು ಶಿಕ್ಷಣ ಹಕ್ಕು ಕಾಯ್ದೆ ಸೆಕ್ಷನ್ 12(2)ರಲ್ಲಿ ಸೂಚಿಸಿರುವಂತೆ ಕಡಿತ ಮಾಡಲು ಕ್ರಮವಹಿಸುವುದು.

ಈ ಶಾಲೆಗಳಲ್ಲಿ ಆರ್.ಟಿ.ಇ. ಅಡಿ ಪ್ರವೇಶ ನೀಡಿದ ಪ್ರಾರಂಭದ ವರ್ಷದಿಂದ ಹೆಚ್ಚುವರಿಯಾಗಿ ಪಾವತಿಯಾಗಿರುವ ಶುಲ್ಕ ಮರುಪಾವತಿಯ ಮೊಬಲಗನ್ನು ಸರ್ಕಾರಕ್ಕೆ ಜಮಾ ಮಾಡುವ ಬಗ್ಗೆಯೂ ಸಹ ಕ್ರಮವಹಿಸುವುದು. ಹೀಗೆ ಕೈಗೊಂಡ ಕ್ರಮದ ಬಗ್ಗೆ ಶಾಲಾವಾರು ಮಾಹಿತಿಯನ್ನು ಈ ಕಚೇರಿಗೆ ಸಲ್ಲಿಸಲು ಸೂಚಿಸಿದೆ. ಇಂತಹ ಯಾವುದೇ ಶಾಲೆಗಳು ನಿಮ್ಮ ಕ್ಷೇತ್ರದಲ್ಲಿ ಇಲ್ಲದಿದ್ದಲ್ಲಿ 'ಶೂನ್ಯ' ವರದಿಯನ್ನು ನೀಡಬೇಕು.

ಮುಂದಿನ ಶುಲ್ಕ ಮರುಪಾವತಿಗೆ ಬೇಡಿಕೆಗಳನ್ನು ಪರಿಶೀಲಿಸುವ ಸಂದರ್ಭದಲ್ಲಿ ಇಂತಹ ಶಾಲೆಗಳ ವಿವರಗಳನ್ನು ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು (ಆಡಳಿತ) ರವರು ಪರಿಶೀಲಿಸಿ ಕಾಯ್ದೆಯಡಿಯಲ್ಲಿನ ಅವಕಾಶದಂತೆ ಪಾವತಿ ಮಾಡಲು ಸೂಚಿಸಿದೆ. ಇದನ್ನು ಅತ್ಯಾದ್ಯತೆ ಎಂದು ಪರಿಗಣಿಸಿ ಕ್ರಮ ತೆಗೆದುಕೊಳ್ಳತಕ್ಕದ್ದು ಹಾಗೂ ಮುಂದಿನ ದಿನಗಳಲ್ಲಿ ಯಾವುದೇ ವ್ಯತ್ಯಾಸವಾದಲ್ಲಿ ನಿಮ್ಮನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ಇವರಿಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ